## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | – 1413 (1771) |
| ಉತ್ತರಿಸಬೇಕಾದ ದಿನಾಂಕ | – 19-03-2021 |
| ಸದಸ್ಯರ ಹೆಸರು | – ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | – ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿರುವ ವಸತಿ ಶಾಲೆ, ವಿದ್ಯಾರ್ಥಿನಿಯರ ನಿಲಯ ಹಾಗೂ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಸ್ವಂತ ಕಟ್ಟಡದಲ್ಲಿ ಹಾಗೂ ಬಾಡಿಗೆಯಲ್ಲಿರುವ ನಿಲಯಗಳ ಸಂಖ್ಯೆ ಎಷ್ಟು; | ಬೀದರ್ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ 3 ವಸತಿ ಶಾಲೆಗಳು, 8 ಬಾಲಕರ ವಿದ್ಯಾರ್ಥಿ ನಿಲಯಗಳು ಹಾಗೂ 8 ಬಾಲಕಿಯರ ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ. (ಕೆಳಗಿನ ಕೋಷ್ಟಕ) |
| ಆ) | ಜಿಲ್ಲೆಯಲ್ಲಿ ಪ್ರಧಾನ ಮಂತ್ರಿ ಜನ್ ವಿಕಾಸ ಕಾರ್ಯಕ್ರಮ ಯೋಜನೆಯಡಿಯಲ್ಲಿ ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ; (ವಿವರವಾದ ಮಾಹಿತಿಯನ್ನು ನೀಡುವುದು) | ಪ್ರಧಾನ ಮಂತ್ರಿ ಜನ್ ವಿಕಾಸ ಕಾರ್ಯಕ್ರಮ ಯೋಜನೆಯಡಿಯಲ್ಲಿ ಫಲಾನುಭವಿಗಳಿಗೆ ನೇರವಾಗಿ ಅನುದಾನವನ್ನು ಬಿಡುಗಡೆ ಮಾಡುವುದಿಲ್ಲ. ಸದರಿ ಯೋಜನೆಯಡಿಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗಾಗಿ ವಸತಿ ಶಾಲೆ ಹಾಗೂ ವಿದ್ಯಾರ್ಥಿನಿಲಯಗಳ ಕಟ್ಟಡಗಳನ್ನು ನಿರ್ಮಾಣ ಮಾಡುವುದು. |
| ಇ) | ಅಲ್ಪಸಂಖ್ಯಾತರಿಗಾಗಿ ನೂತನ ಹಾಸ್ಟೆಲ್‌ಗಳನ್ನು ಪ್ರಾರಂಭಿಸಲು ಸರ್ಕಾರ ಇಚ್ಛಿಸಿದೆಯೇ? (ಮಾಹಿತಿ ನೀಡುವುದು) | -ಇಲ್ಲ- |

| 3 ವಸತಿ ಶಾಲೆಗಳು | | 8 ಬಾಲಕರ ವಿದ್ಯಾರ್ಥಿ ನಿಲಯಗಳು | | 8 ಬಾಲಕಿಯರ ವಿದ್ಯಾರ್ಥಿ ನಿಲಯಗಳು | |
|---|---|---|---|---|---|
| ಸ್ವಂತ ಕಟ್ಟಡ | ಬಾಡಿಗೆ ಕಟ್ಟಡ | ಸ್ವಂತ ಕಟ್ಟಡ | ಬಾಡಿಗೆ ಕಟ್ಟಡ | ಸ್ವಂತ ಕಟ್ಟಡ | ಬಾಡಿಗೆ ಕಟ್ಟಡ |
| 2 | 1 | 7 | 1 | 7 | 1 |

ಸಂಖ್ಯೆ:MWD 124 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ
ಅಲ್ಪಸಂಖ್ಯಾತರ ಕಲ್ಯಾಣ ಸಚಿವರು